ಫಾರ್ಮಸಿ ಕಾಲೇಜಿನಲ್ಲಿ ಪ್ರತಿ ವರ್ಷ ವಿದ್ಯಾರ್ಥಿಗಳಿಗೆ ಆಗುತ್ತಿರುವ ಖರ್ಚಿನ ವಿವರದ ಬಗ್ಗೆ

ಳಟಿ. ಶ್ರೀ ಶಿವಾನಂದ ಎಚ್. ಕೌಜಲಗಿ(ಬೈಲಹೊಂಗಲ).–ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಫಾರ್ಮಸಿ ಕಾಲೇಜುಗಳು ಇರುವುದು ಮತ್ತು ಎಷ್ಟು ಖಾಸಗಿ ಫಾರ್ಮಸಿ ಕಾಲೇಜುಗಳು ಇರುವುದು ?

ಆ) ಸರ್ಕಾರಿ ಫಾರ್ಮಸಿ ಕಾಲೇಜುಗಳಲ್ಲಿ ಎಷ್ಟು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿರುವರು ?

ಇ) ಅವರಲ್ಲಿ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಮತ್ತು ಹೊರ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

ಈ) ಸರ್ಕಾರಿ ಫಾರ್ಮಸಿ ಕಾಲೇಜಿನಲ್ಲಿ ಪ್ರತಿ ವಿದ್ಯಾರ್ಥಿಗೆ ಪ್ರತಿ ವರ್ಷ ಎಷ್ಟು ಹಣ ಸರ್ಕಾರದವರು ವೆಚ್ಚ ಮಾಡುತ್ತಿದ್ದಾರೆ ?

ಉ) ಆ ವಿದ್ಯಾರ್ಥಿಯು ಫಾರ್ಮಸಿ ಕೋರ್ಸನ್ನು ಪೂರ್ಣಗೊಳಿಸಲು ಸರ್ಕಾರಕ್ಕೆ ಎಷ್ಟು ಹಣ ವೆಚ್ಚವಾಗುತ್ತಿದೆ ?

ಶ್ರೀಮತಿ ಮನೋರಮ ಮಾಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).–

ಅ) ಔಷಧ ನಿಯಂತ್ರಣ ಇಲಾಖೆ

೧) ಸರ್ಕಾರಿ ಫಾರ್ಮಸಿ ಕಾಲೇಜು—೧

೨) ಖಾಸಗಿ ಫಾರ್ಮಸಿ ಕಾಲೇಜು—೫೫

	ಫಾರ್ಮಸಿ ಡಿಪ್ಲೊಮಾ	ಫಾರ್ಮಸಿ ಪದವಿ	ಸ್ನಾತಕೋತ್ತರ ಪದವಿಯಲ್ಲಿ ಫಾರ್ಮಸಿ
	೧೦೦	೧೬೦	೫೧
ಕರ್ನಾಟಕ	೯೯	೧೨೨	೫೧
ಹೊರರಾಜ್ಯ	೧	೮	ಇಲ್ಲ

ಆ) ೧) ಡಿಗ್ರಿ ಮತ್ತು ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ ತಲಾ ೧೧,೭೮೫-೦೦ ರೂ. ಗಳು ವೆಚ್ಚವಾಗುತ್ತಿದೆ.

೨) ಎಮ್. ಫಾರ್ಮದ ಪ್ರತಿ ವಿದ್ಯಾರ್ಥಿಗೆ ಪ್ರತಿ ವರ್ಷ ತಲಾ ೨೨,೮೦೦-೦೦ ರೂ.ಗಳು ವೆಚ್ಚವಾಗುತ್ತಿದೆ.

ಇ) ಡಿಪ್ಲೊಮಾ ರೂ. ೨೩,೫೭೦-೦೦

ಪದವಿ ರೂ. ೪೭,೪೦-೦೦

ಸ್ನಾತಕೋತ್ತರ ರೂ. ೪೫,೬೦೦-೦೦

ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಮೆಡಿಕಲ್ ಕಾಲೇಜುಗಳ ಬಗ್ಗೆ

ಳಟಿ. ಶ್ರೀ ಶಿವಾನಂದ ಎಚ್. ಕೌಜಲಗಿ(ಬೈಲಹೊಂಗಲ).–ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ಸರ್ಕಾರಿ ಮೆಡಿಕಲ್ ಕಾಲೇಜುಗಳ ಸಂಖ್ಯೆ ಎಷ್ಟು ಹಾಗೂ ಖಾಸಗಿ ಮೆಡಿಕಲ್ ಕಾಲೇಜುಗಳ ಸಂಖ್ಯೆ ಎಷ್ಟು ? (ಹೆಸರು ಹಾಗೂ ವಿವರಗಳನ್ನು ಒದಗಿಸುವುದು)

ಆ) ಇವುಗಳ ಪೈಕಿ ಸರ್ಕಾರಿ ಮೆಡಿಕಲ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? ಹಾಗೂ ಖಾಸಗಿ ಮೆಡಿಕಲ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

ಇ) ಈ ವಿದ್ಯಾರ್ಥಿಗಳ ಪೈಕಿ ರಾಜ್ಯದ ವಿದ್ಯಾರ್ಥಿಗಳೆಷ್ಟು ಹಾಗೂ ರಾಜ್ಯದ ವಿದ್ಯಾರ್ಥಿಗಳು ಎಷ್ಟು ?

ಶ್ರೀಮತಿ ಮಂಗಳಾ ಸುರೇಶ್ ಅಂಗಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).—

ಸರ್ಕಾರಿ ವೈದ್ಯಕೀಯ ಕಾಲೇಜುಗಳು = ೪

೧) ಬೆಂಗಳೂರು ವೈದ್ಯಕೀಯ ಕಾಲೇಜು, ಬೆಂಗಳೂರು
೨) ಮೈಸೂರು ವೈದ್ಯಕೀಯ ಕಾಲೇಜು, ಮೈಸೂರು
೩) ಕೆ.ಎಂ.ಸಿ. ಹುಬ್ಬಳ್ಳಿ
೪) ಬಳ್ಳಾರಿ ವೈದ್ಯಕೀಯ ಕಾಲೇಜು ಬಳ್ಳಾರಿ

ಖಾಸಗಿ ವೈದ್ಯಕೀಯ ಕಾಲೇಜುಗಳು = ೧೪

೧) ಕೆಎಂಸಿ ಮಂಗಳೂರು ವಿಭಾಗ
ಕೆಎಂಸಿ ಮಣಿಪಾಲ ವಿಭಾಗ
೨) ಸೆಂಟ್ ಜಾನ್ಸ್ ವೈದ್ಯಕೀಯ ಕಾಲೇಜು, ಬೆಂಗಳೂರು
೩) ಜೆ.ಎನ್. ವೈದ್ಯಕೀಯ ಕಾಲೇಜು, ಬೆಳಗಾಂ
೪) ಎಂ.ಆರ್. ವೈದ್ಯಕೀಯ ಕಾಲೇಜು, ಗುಲ್ಬರ್ಗಾ
೫) ಜೆ.ಜೆ.ಎಂ. ವೈದ್ಯಕೀಯ ಕಾಲೇಜು ದಾವಣಗೆರೆ
೬) ಎಂ.ಎಸ್. ರಾಮಯ್ಯ ವೈದ್ಯಕೀಯ ಕಾಲೇಜು, ಬೆಂಗಳೂರು
೭) ಕೆಂಪೇಗೌಡ ವೈದ್ಯಕೀಯ ಕಾಲೇಜು, ಬೆಂಗಳೂರು
೮) ಡಾ. ಬಿ.ಆರ್. ಅಂಬೇಡ್ಕರ್ ವೈದ್ಯಕೀಯ ಕಾಲೇಜು, ಬೆಂಗಳೂರು
೯) ಆಲ್ ಅಮೀನ್, ವೈದ್ಯಕೀಯ ಕಾಲೇಜು, ಬಿಜಾಪುರ
೧೦) ಜೆ.ಎಸ್.ಎಸ್. ವೈದ್ಯಕೀಯ ಕಾಲೇಜು, ಮೈಸೂರು
೧೧) ಆದಿಚುಂಚನಗಿರಿ ವೈದ್ಯಕೀಯ ಕಾಲೇಜು, ಬೆಳ್ಳೂರು
೧೨) ಬಿ.ಎಲ್.ಡಿ.ಇ.ಎ. ವೈದ್ಯಕೀಯ ಕಾಲೇಜು, ಬಿಜಾಪುರ
೧೩) ದೇವರಾಜ ಅರಸ್ ವೈದ್ಯಕೀಯ ಕಾಲೇಜು, ಕೋಲಾರ
೧೪) ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು, ತುಮಕೂರು

ಸರ್ಕಾರಿ ವೈದ್ಯಕೀಯ ಕಾಲೇಜು—೨೮೨೭
ಖಾಸಗಿ ವೈದ್ಯಕೀಯ ಕಾಲೇಜು—೯೧೫೫

ಸರ್ಕಾರಿ ವೈದ್ಯಕೀಯ ಕಾಲೇಜಂ		ಖಾಸಗಿ ವೈದ್ಯಕೀಯ ಕಾಲೇಜಂ	
ರಾಜ್ಯದ ವಿದ್ಯಾರ್ಥಿಗಳು	೨೬೯೯	ರಾಜ್ಯದ ವಿದ್ಯಾರ್ಥಿಗಳು	೩೬೭೯
ಹೊರ ರಾಜ್ಯದ ವಿದ್ಯಾರ್ಥಿಗಳು	೧೨೭	ಹೊರ ರಾಜ್ಯದ ವಿದ್ಯಾರ್ಥಿಗಳು	೫೪೭೬

ಜಿಲ್ಲಾ ಪರಿಷತ್ತುಗಳ ಅಧ್ಯಕ್ಷ ಉಪಾಧ್ಯಕ್ಷರುಗಳಿಗೆ ಆದ ವೆಚ್ಚದ ಬಗ್ಗೆ

೩೨೨. **ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ).**—ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಜಿಲ್ಲಾ ಪರಿಷತ್ತುಗಳ ಅಧ್ಯಕ್ಷರುಗಳ ಮತ್ತು ಉಪಾಧ್ಯಕ್ಷರುಗಳ ಸಂಬಳ ಭತ್ಯೆ ಮತ್ತು ಮನೆ ಬಾಡಿಗೆ ಭತ್ಯೆಗಳಿಗೆ ಜಿಲ್ಲಾ ಪರಿಷತ್ತುಗಳು ಅಸ್ತಿತ್ವಕ್ಕೆ ಬಂದಾಗಿನಿಂದ ೧೯೯೦ನೇ ಮಾರ್ಚಿ ಕೊನೆಯವರೆಗೆ ಖರ್ಚಾದ ಹಣವೆಷ್ಟು ? (ಜಿಲ್ಲಾವಾರು ವಿವರ ಕೊಡುವುದು)

ಆ) ಉಪಾಧ್ಯಕ್ಷರ ಹುದ್ದೆಗಳನ್ನು ರದ್ದುಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಮಂತ್ರಿಗಳು).—

ಅ) ಉತ್ತರವನ್ನು ಅನುಬಂಧದಲ್ಲಿ ಕೊಡಲಾಗಿದೆ.

ಆ) ಇಲ್ಲ.